ಕರ್ನಾಟಕ ವಿಧಾನ ಸಭೆ
KARNATAKA LEGISLATIVE ASSEMBLY

ಶುಕ್ರವಾರ, ೨೩ನೇ ನವೆಂಬರ್ ೧೯೯೦, ಮಾರ್ಗಶಿರ, ೨, ೧೯೧೨

ಸದನವು ವಿಧಾನ ಸೌಧದಲ್ಲಿರುವ ವಿಧಾನ ಸಭೆಯ ಸಭಾಂಗಣದಲ್ಲಿ
ಬೆಳಿಗ್ಗೆ ೯-೩೦ ಗಂಟೆಗೆ ಸಮಾವೇಶಗೊಂಡಿತು.

[ಅಧ್ಯಕ್ಷರು (ಶ್ರೀ ಎಸ್. ಎಂ. ಕೃಷ್ಣ) ಅವರು ಪೀಠವನ್ನು ಅಲಂಕರಿಸಿದ್ದರು.]

ಚುಕ್ಕೆಗುರ್ತಿನ ಪ್ರಶ್ನೆಗಳಿಗೆ ಬಾಯಿ ಮಾತಿನ ಮೂಲಕ ನೀಡಲಾದ ಉತ್ತರಗಳು

ಸ್ವಾತಂತ್ರ್ಯ ಹೋರಾಟಗಾರರ ಬೇಡಿಕೆಗಳ ಬಗ್ಗೆ

೨೦೯ ಶ್ರೀ ಎ. ಕೆ. ಆನಂತಕೃಷ್ಣ (ಶಿವಾಜಿನಗರ).—ಮಾನ್ಯ ಮುಖ್ಯ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ.

ಅ) ಸ್ವಾತಂತ್ರ್ಯ ಹೋರಾಟಗಾರರ ಈ ಕೆಳಕಂಡ ಬೇಡಿಕೆಗಳ ಬಗ್ಗೆ ಕೆ.ಪಿ.ಸಿ.ಸಿ. (ಐ) ಸ್ವಾತಂತ್ರ್ಯ ಹೋರಾಟಗಾರರ ವಿಭಾಗವು ಮನವಿ ಸಲ್ಲಿಸಿದೆಯೇ :

೧) ಕೆ.ಎಸ್.ಆರ್.ಟಿ.ಸಿ. ಬಸ್ಸ್‌ನಲ್ಲಿ ಆಜೀವ ಪರ್ಯಂತ ಪ್ರಯಾಣಿಸಲು ಉಚಿತ ಬಸ್ ಪಾಸ್ ನೀಡುವ ಬಗ್ಗೆ.

೨) ಈಗಾಗಲೇ ಒದಗಿಸಿರುವ ವೈದ್ಯಕೀಯ ಸೌಲಭ್ಯವನ್ನು ಹೊರತುಪಡಿಸಿ ಇನ್ನೂ ಹೆಚ್ಚಿನ ಸೌಲಭ್ಯ ನೀಡುವ ಬಗ್ಗೆ,

೩) ಇನ್ನಿತರ ಸೌಲಭ್ಯಗಳು.

ಆ) ಹಾಗಿದ್ದಲ್ಲಿ, ಈ ಬೇಡಿಕೆಗಳ ಬಗ್ಗೆ ಸರ್ಕಾರವು ಕೈಗೊಂಡ ಕ್ರಮವೇನು ;

ಇ) ಹಾಗಿಲ್ಲದಿದ್ದಲ್ಲಿ, ಸರ್ಕಾರವು ಸ್ವಾತಂತ್ರ್ಯೋತ್ತರ ಈ ಬೇಡಿಕೆಗಳನ್ನು ಈಡೇರಿಸಲು ಕ್ರಮ ತೆಗೆದುಕೊಳ್ಳುವುದೇ ?

ಶ್ರೀ ಎಸ್. ಬಂಗಾರಪ್ಪ (ಮುಖ್ಯಮಂತ್ರಿಗಳು).—

(ಅ) ಹೌದು.

ಬಸ್ ಸೌಲಭ್ಯ.—

ಆ) ರಾಜ್ಯ ಸರ್ಕಾರವು ಸ್ವಾತಂತ್ರ್ಯ ಹೋರಾಟಗಾರರಿಗೆ ಮತ್ತು ಅವರ ಪತ್ನಿ : ಪತಿಗೆ ವರ್ಷಕ್ಕೊಂದಾವರ್ತಿ ಕೆ.ಎಸ್.ಆರ್.ಟಿ.ಸಿ. ಬಸ್‌ನಲ್ಲಿ ರಾಜ್ಯದ ಯಾವುದೇ ಎರಡು ಸ್ಥಳಗಳ ನಡುವೆ ಉಚಿತ ಪ್ರಯಾಣ ಮಾಡುವ ಸೌಲಭ್ಯ ಕಲ್ಪಿಸಿದೆ.

ವೈದ್ಯಕೀಯ ಸೌಲಭ್ಯಗಳು.—

ವಾರ್ಷಿಕ ರೂ. ೩,೬೦೦ ಆದಾಯವಿರುವ ಸ್ವಾತಂತ್ರ್ಯ ಹೋರಾಟಗಾರರಿಗೆ ಉಚಿತ ವೈದ್ಯಕೀಯ ನೆರವನ್ನು ಈಗಾಗಲೇ ಒದಗಿಸಲಾಗಿದೆ.

ಶಿಕ್ಷಣ ಸೌಲಭ್ಯಗಳು.—

ಸ್ವಾತಂತ್ರ್ಯ ಹೋರಾಟಗಾರರ ಮಕ್ಕಳಿಗೆ ಆರು ವೈದ್ಯಕೀಯ, ೩೩ ತಾಂತ್ರಿಕ ಕಾಲೇಜುಗಳಲ್ಲಿ ಹಾಗೂ ೭೪ ಸೀಟುಗಳು ಡಿಪ್ಲೊಮೋ ಕೋರ್ಸ್‌ಗಳಲ್ಲಿ ಸ್ಥಾನಗಳನ್ನು ಕಾಯ್ದಿರಿಸಲಾಗಿದೆ. ಈ ಕಾಯ್ದಿರಿಸುವಿಕೆಯ ಸಂಖ್ಯೆಯು ವರ್ಷದಿಂದ ವರ್ಷಕ್ಕೆ ಬದಲಾವಣೆಗೆ ಒಳಪಟ್ಟಿರುತ್ತದೆ.